# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಕೆ.ಎಸ್.ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಗೆಂಡ್ಲ ಗ್ರಾಮ ಪಂಚಾಯಿತಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ದಾಖಲಿಸಿರುವ ಅರ್ಜಿ ಸಂಖ್ಯೆ:4324/2017ರ ಕುರಿತಂತೆ ಮಾನ್ಯ ನ್ಯಾಯ ಮಂಡಳಿಯು ನೀಡಿರುವ ತೀರ್ಪನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 122 ಗ್ರಾಪಂಕಾ 2011, ದಿನಾಂಕ:19.05.2011.
2. ಅಪರ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:ಲೋಕ್/ ಎಆರ್‌ಇ–3/ ಇಎನ್‌ಕ್ಯೂ–89/ 2011, ದಿನಾಂಕ:03.06.2015.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: ಲೋಕ್/ಎಆರ್‌ಇ–3/14–ಎ/ಇಎನ್‌ಕ್ಯೂ–89/ 2011, ದಿನಾಂಕ:17.01.2017.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 286 ಗ್ರಾಪಂಕಾ 2015, ದಿನಾಂಕ:06.07.2017.
5. ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ರವರ ಅರ್ಜಿ ಸಂಖ್ಯೆ: 4324/2017 ರ ಕುರಿತಂತೆ ದಿನಾಂಕ:20.12.2018 ರಂದು ನೀಡಿರುವ ತೀರ್ಪು.
6. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ರಿಟ್ ಅರ್ಜಿ ಸಂಖ್ಯೆ: 8002/2020 (S-KAT) ರ ಕುರಿತಂತೆ ದಿನಾಂಕ:01.12.2021 ರಂದು ನೀಡಿರುವ ತೀರ್ಪು.
7. ಕಾನೂನು ಇಲಾಖೆಯ ಟಿಪ್ಪಣಿ ಸಂಖ್ಯೆ: ಕಾನೂನು/ಅ.ಕಾ.ಕಾ–1/ವ್ಯಾಜ್ಯ ಸಂಖ್ಯೆ: 230, ದಿನಾಂಕ:10.03.2022.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಶ್ರೀ ಕೆ.ಎಸ್.ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಗೆಂಡ್ಲ ಗ್ರಾಮ ಪಂಚಾಯಿತಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಲಂಚ ಸ್ವೀಕಾರದ ಆರೋಪದ ಮೇಲೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (2) ರಲ್ಲಿ ಅಪರ ನಿಬಂಧಕರು, ವಿಚಾರಣೆಗಳು–89, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧದ ಆಪಾದನೆಗಳ ಕುರಿತಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರಡಿ ಇಲಾಖಾ ವಿಚಾರಣೆ ನಡೆಸಿ, ಸಲ್ಲಿಸಿದ ವಿಚಾರಣಾ ವರದಿಯನ್ವಯ ಆರೋಪಗಳು ಸಾಬೀತಾಗಿರುವುದಾಗಿ ನಿರ್ಣಯಿಸಿರುತ್ತಾರೆ. ಸದರಿ ವಿಚಾರಣೆ ವರದಿಯನ್ನಾಧರಿಸಿ ಮಾನ್ಯ ಲೋಕಾಯುಕ್ತರವರ ಕ್ರಮಾಂಕ(3)ರ ಶಿಫಾರಸ್ಸಿನಂತೆ ಸದರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 8(viii) ರಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ಸೇವೆಯಿಂದ ವಜಾಗೊಳಿಸುವ ದಂಡನೆ ವಿಧಿಸಿ ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಆದೇಶಿಸಲಾಗಿದೆ.

...2

ಮೇಲೆ ಓದಲಾದ ಕ್ರಮಾಂಕ (4) ರ ಸರ್ಕಾರದ ಆದೇಶದ ವಿರುದ್ಧ ಸದರಿಯವರು ಕ್ರಮಾಂಕ (5) ರಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ದಾಖಲಿಸಿದ್ದ ಅರ್ಜಿ ಸಂಖ್ಯೆ: 4324/2017 ರ ಕುರಿತಂತೆ ಮಾನ್ಯ ನ್ಯಾಯಾಲಯವು ದಿನಾಂಕ:20.12.2018ರಂದು ನೀಡಿದ ಆದೇಶದಲ್ಲಿ ಅರ್ಜಿದಾರರ ಅರ್ಜಿಯನ್ನು ಅಂಗೀಕರಿಸಿ, ಕ್ರಮಾಂಕ(4)ರ ಸರ್ಕಾರದ ಆದೇಶವನ್ನು ರದ್ದುಗೊಳಿಸಿ, ನೌಕರರಿಗೆ ಸೇವೆಯಿಂದ ವಜಾಗೊಳಿಸುವ ದಂಡನೆಯ ಬದಲಾಗಿ ದಿನಾಂಕ:06.07.2017 ರಿಂದ ಜಾರಿಗೆ ಬರುವಂತೆ ನೌಕರರನ್ನು ಕಡ್ಡಾಯ ನಿವೃತ್ತಿಗೊಳಿಸುವ ದಂಡನೆಯನ್ನು ವಿಧಿಸುವಂತೆ ಹಾಗೂ ಸದರಿಯವರಿಗೆ ಪಿಂಚಣಿ ಹಾಗೂ ಪಿಂಚಣಿ ಸೌಲಭ್ಯಗಳನ್ನು ಮಂಜೂರು ಮಾಡಲು ಆದೇಶಿರುತ್ತದೆ.

ಮಾನ್ಯ ನ್ಯಾಯ ಮಂಡಳಿಯ ಕ್ರಮಾಂಕ(5)ರ ಆದೇಶವನ್ನು ಪ್ರಶ್ನಿಸಿ, ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಕ್ರಮಾಂಕ(6) ರಲ್ಲಿ ರಿಟ್ ಅರ್ಜಿ ಸಂಖ್ಯೆ:802/2020 (S-KAT) ದಾಖಲಿಸಿದ್ದು, ಈ ಪ್ರಕರಣದ ಕುರಿತಂತೆ ಮಾನ್ಯ ನ್ಯಾಯಾಲಯವು ದಿನಾಂಕ:01.12.2021 ರಂದು ಹೊರಡಿಸಿದ ಆದೇಶದಲ್ಲಿ ಸರ್ಕಾರದ ರಿಟ್ ಅರ್ಜಿಯನ್ನು ವಜಾಗೊಳಿಸಿ, ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ದಿನಾಂಕ:20.12.2018 ರ ಆದೇಶವನ್ನು ಊರ್ಜಿತಗೊಳಿಸಿರುತ್ತದೆ.

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ:01.12.2021 ರಂದು ನೀಡಿದ ಆದೇಶದ ಉದೃತ ಭಾಗ ಈ ಕೆಳಕಂಡಂತಿರುತ್ತದೆ.

> The main ground of challenge in this writ petition is that the Tribunal has modified the order of punishment merely on the affidavit filed by respondent No.1. It appears, the Tribunal, having come to a conclusion that the enruiry report cannot be interfered with, as far as the charges proved, only proceeded to modify the quantum of punishment having regard to the facts and circumstances of the case. There is no infirmity in the order impugned.
>
> For the reasons aforesaid, the writ petition stands dismissed.

ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ:01.12.2021ರ ಆದೇಶದಂತೆ ನಿಯಮಾನುಸಾರ ಕ್ರಮವಹಿಸುವ ಸಂಬಂಧ ಕಾನೂನು ಕೋಶದ ಮುಖ್ಯಸ್ಥರ ಅಭಿಪ್ರಾಯ ಕೋರಲಾಗಿ, ಸದರಿಯವರು ಅಭಿಪ್ರಾಯಿಸಿರುವ ಅಂಶಗಳಿಗೆ ಕಾನೂನು ಇಲಾಖೆಯು ಮೇಲೆ ಓದಲಾದ ಕ್ರಮಾಂಕ (7) ರ ಟಿಪ್ಪಣಿಯಲ್ಲಿ ಅನುಮೋದನೆ ನೀಡಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ:4324/2017 ರ ಪ್ರಕರಣದ ಕುರಿತಂತೆ ದಿನಾಂಕ:20.12.2018 ರಂದು ನೀಡಿದ ಆದೇಶದಂತೆ ಶ್ರೀ ಕೆ.ಎಸ್.ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಗೆಂಡ್ಲ ಗ್ರಾಮ ಪಂಚಾಯಿತಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರಿಗೆ ಸೇವೆಯಿಂದ ವಜಾಗೊಳಿಸಿರುವ ದಂಡನೆಯನ್ನು ಈಗಾಗಲೇ ವಿಧಿಸಿ ಆದೇಶಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 286 ಗ್ರಾಪಂಕಾ 2015, ದಿನಾಂಕ: 06.07.2017 ರ ಆದೇಶವನ್ನು ಹಿಂಪಡೆದು, ನೌಕರರನ್ನು ದಿನಾಂಕ:06.07.2017 ರಿಂದ ಜಾರಿಗೆ ಬರುವಂತೆ ಕಡ್ಡಾಯ

ನಿವೃತ್ತಿಗೊಳಿಸುವ ದಂಡನೆಯನ್ನು ವಿಧಿಸಲು ಹಾಗೂ ಸದರಿಯವರಿಗೆ ಪಿಂಚಣಿ ಹಾಗೂ ಪಿಂಚಣಿ ಸೌಲಭ್ಯಗಳನ್ನು ಮಂಜೂರು ಮಾಡಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/144/ಗ್ರಾಪಂಸಿ/2019, ಬೆಂಗಳೂರು, ದಿನಾಂಕ:23.08.2022.**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ.ಎಸ್.ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಗೆಂಡ್ಲ ಗ್ರಾಮ ಪಂಚಾಯಿತಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿಂತೆ ನೌಕರರನ್ನು ಸೇವೆಯಿಂದ ವಜಾಗೊಳಿಸಿರುವ ದಂಡನೆಯನ್ನು ವಿಧಿಸಿ ಆದೇಶಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 286 ಗ್ರಾಪಂಕಾ 2015, ದಿನಾಂಕ:06.07.2017 ಅನ್ನು ಹಿಂಪಡೆದು, ಸದರಿಯವರಿಗೆ ದಿನಾಂಕ:06.07.2017 ರಿಂದಲೇ ಜಾರಿಗೆ ಬರುವಂತೆ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆಯನ್ನು ವಿಧಿಸಿ ಹಾಗೂ ಸದರಿಯವರಿಗೆ ಪಿಂಚಣಿ ಹಾಗೂ ಪಿಂಚಣಿ ಸೌಲಭ್ಯಗಳನ್ನು ಮಂಜೂರು ಮಾಡಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 23/08/22
(ಬಿ.ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ,
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಶಿವಮೊಗ್ಗ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಸೊರಬ, ಶಿವಮೊಗ್ಗ ಜಿಲ್ಲೆ.
6. ಸರ್ಕಾರಿ ವಕೀಲರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
7. ಸರ್ಕಾರಿ ವಕೀಲರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ಶ್ರೀ ಕೆ.ಎಸ್.ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಗೆಂಡ್ಲ ಗ್ರಾಮ ಪಂಚಾಯಿತಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ.
9. ಗಣಕ ಕೋಶ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು, ಪಂಚಾಯತ್ ರಾಜ್ ರವರ ಆಪ್ತ ಸಹಾಯಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

********